**<u>1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ</u>**

**<u>ಸಿ.ಸಿ. ಸಂಖ್ಯೆ : 499/2026</u>**

<u>ಪಿರ್ಯಾದಿ</u> : ರಾಜ್ಯ, ಪರವಾಗಿ ಬಣಕಲ್ ಪೊಲೀಸ್ ಠಾಣೆ,
ಮೂಡಿಗೆರೆ ತಾಲ್ಲೂಕು.

ವಿರುದ್ಧ

<u>ಆರೋಪಿ</u> : ಗೌರಮ್ಮ,
ವಯಸ್ಸು ಸುಮಾರು 50 ವರ್ಷ,
ಕೋಂ ದಿಃ ಹೆಚ್.ಬಿ. ಇಂದ್ರೇಶ್,
ವಾಸಃ ಭಾರತೀಬೈಲ್, ಬಿ ಹೊಸಹಳ್ಳಿ ಗ್ರಾಮ,
ಬಣಕಲ್ ಹೋಬಳಿ, ಮೂಡಿಗೆರೆ ತಾಲ್ಲೂಕು.

<u>ದೋಷಾರೋಪಣೆ</u>

ಶ್ರೀಮತಿ ಸುರಕ್ಷ ಕೆ.ಕೆ., 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ-

ದಿನಾಂಕ 28.09.2025 ರಂದು ಸಂಜೆ 7.00 ರ ಸಮಯದಲ್ಲಿ ಬಣಕಲ್ ಪೊಲೀಸ್ ಠಾಣಾ ವ್ಯಾಪ್ತಿಯ ಬಿ. ಹೊಸಹಳ್ಳಿ ಗ್ರಾಮದ ಭಾರತೀ ಬೈಲ್ ವಾಸಿ ಆರೋಪಿಯಾದ ನೀವು ನಿಮ್ಮ ಮನೆಯ ಒಳಗೆ ಅಕ್ರಮವಾಗಿ ಸುಮಾರು ಒಟ್ಟು 1½ ಲೀಟರ್ ನಷ್ಟು ಕಳ್ಳಭಟ್ಟಿ ಸಾರಾಯಿಯನ್ನು ಅಕ್ರಮವಾಗಿ ತಯಾರಿಸಿ ಮಾರಾಟ ಮಾಡುವ ಉದ್ದೇಶದಿಂದ ನಿಮ್ಮ ವಶದಲ್ಲಿಟ್ಟುಕೊಂಡಿದ್ದಾಗ ಪೊಲೀಸರು ನಡೆಸಿದ ದಾಳಿ ಕಾಲಕ್ಕೆ ಸಿಕ್ಕಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32(1) ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**2.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು 1½ ಲೀಟರ್ ನಷ್ಟು ಕಳ್ಳಭಟ್ಟಿ ಸಾರಾಯಿಯನ್ನುನಿಮ್ಮ ಮನೆಯ ಒಳಗೆ ಅಕ್ರಮವಾಗಿ ಸಂಗ್ರಹಿಸಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 34 ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ***?***

ಸದರಿ ಮೇಲ್ಕಂಡ ಆರೋಪಗಳನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆಯಾಗತಕ್ಕದೆಂದು ಆದೇಶಿಸಲಾಗಿದೆ.

ಪ್ರಃ 1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದ್ದೀರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

(ಆರೋಪಿಗೆ ದಿನಾಂಕ 17.06.2026 ರಂದು ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)

ಸಹಿ/-

ಮೂಡಿಗೆರೆ
ದಿನಾಂಕಃ 17.06.2026

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ ಮೂಡಿಗೆರೆ.